ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 233(ಎ) ಅಮುಕಾ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 24.07.2020

ಅಧಿಸೂಚನೆ

ವಿಪತ್ತು ನಿರ್ವಹಣಾ ಕಾಯ್ದೆ 2005ರ ಸೆಕ್ಷನ್ 24 (f) ಮತ್ತು ಸೆಕ್ಷನ್ 24 (l) ಅಡಿಯಲ್ಲಿ ನೀಡಲಾಗಿರುವ ಅಧಿಕಾರಗಳ ಅಡಿಯಲ್ಲಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರಾಗಿರುವ ಸಾಮರ್ಥ್ಯದಲ್ಲಿ ಈ ಕೆಳಗೆ ಸಹಿ ಮಾಡಿ ಹೊರಡಿಸಿರುವ ಅಧಿಸೂಚನೆ ಸಂಖ್ಯೆ: HFW 233 ACS 2020 ದಿನಾಂಕ 27.06.2020 ರ ಪ್ರಕಾರ ರಾಜ್ಯದ ಯಾವುದೇ ಖಾಸಗಿ ವೈದ್ಯಕೀಯ ಸಂಸ್ಥೆಗಳು ಕೋವಿಡ್-19 ಅಥವಾ ಕೋವಿಡ್-19 ನಂತಹ ರೋಗ ಲಕ್ಷಣಗಳುಳ್ಳ ರೋಗಿಗಳಿಗೆ ದಾಖಲಾತಿ ನಿರಾಕರಿಸುವಂತಿಲ್ಲ ಹಾಗೂ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆ 2017 ಸೆಕ್ಷನ್ 11 ಮತ್ತು 11ಎ ಯಲ್ಲಿರುವ ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

ಸಾಮಾನ್ಯ ರೋಗಿಗಳೂ ಕೂಡ ಕೋವಿಡ್-19 ಸೋಂಕಿಗೆ ಒಳಗಾಗಬಹುದೆಂಬ ಭಯದಿಂದ ರಾಜ್ಯದ ಕೆಲವು ಖಾಸಗಿ ವೈದ್ಯಕೀಯ ಸಂಸ್ಥೆಗಳು ಅವರಿಗೆ ಚಿಕಿತ್ಸೆ ನೀಡಲು ತಪ್ಪಿಸಿಕೊಳ್ಳುತ್ತಿದ್ದಾರೆ ಮತ್ತು ದಾಖಲಾತಿ ಮಾಡಿಕೊಳ್ಳಲು ನಿರಾಕರಿಸುತ್ತಿದ್ದಾರೆ. ಇದು ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆ ಕಾಯ್ದೆ 2017 ರ ಸೆಕ್ಷನ್ 11 ಮತ್ತು 11ಎ ರ ನಿಬಂಧನೆಗಳಿಗೆ ವಿರುದ್ಧವಾಗಿದೆ.

ಈಗ, ವಿಪತ್ತು ನಿರ್ವಹಣಾ ಕಾಯ್ದೆ 2005 ರ ಸೆಕ್ಷನ್ 24(f) ಮತ್ತು ಸೆಕ್ಷನ್ 24 (l) ಅಡಿಯಲ್ಲಿ ನೀಡಲಾಗಿರುವ ಅಧಿಕಾರಗಳ ಅಡಿಯಲ್ಲಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರು ಸಹಿ ಮಾಡಿ ಹೊರಡಿಸಿರುವ ಈ ಆದೇಶದ ಅನುಸಾರ ಆಸ್ಪತ್ರೆಗೆ ಬರುವ ರೋಗಿಯು ಕೋವಿಡ್ ಲಕ್ಷಣಗಳನ್ನು ಹೊಂದಿದ್ದರೂ ಅಥವಾ ಹೊಂದದೆ ಇದ್ದರೂ ಆಸ್ಪತ್ರೆಯಲ್ಲಿ ಹಾಸಿಗೆ ಲಭ್ಯವಿದ್ದು ರೋಗಿಯು ಶುಲ್ಕ ಭರಿಸಲು ಸಿದ್ಧನಾಗಿದ್ದಲ್ಲಿ ರಾಜ್ಯದ ಯಾವುದೇ ಖಾಸಗಿ ವೈದ್ಯಕೀಯ ಸಂಸ್ಥೆಗಳು ಪ್ರವೇಶ ನಿರಾಕರಿಸುವಂತಿಲ್ಲ. ಖಾಸಗಿ ವೈದ್ಯಕೀಯ ಸಂಸ್ಥೆಗಳು ಕೋವಿಡ್-19 ಅಥವಾ ಕೋವಿಡ್-19 ಇಲ್ಲದಿರುವ ರೋಗಿಗೆ ಪ್ರಯೋಗಾಲಯದಿಂದ ಪಾಸಿಟಿವ್ ಅಥವಾ ನೆಗೆಟಿವ್ ವರದಿ ತರುವಂತೆ ಒತ್ತಾಯಿಸದೆ ರೋಗಿಗಳು ನೀಡುವ ಎಸ್ಎಮ್ಎಸ್/ವ್ಯಾಟ್ಸಪ್ ಅಥವಾ ಆರೋಗ್ಯ ಸೇತು ವರದಿ ಇತ್ಯಾದಿಗಳ ಆಧಾರದ ಮೇಲೆ ರೋಗಿಗಳಿಗೆ ಚಿಕಿತ್ಸೆ ಅಥವಾ ಪ್ರವೇಶ ನೀಡಬೇಕು.

(ಟಿ.ಎಂ. ವಿಜಯ್ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ಅಧ್ಯಕ್ಷರು
ರಾಜ್ಯ ಕಾರ್ಯಕಾರಿ ಸಮಿತಿ,
ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ

ಇವರಿಗೆ :

ಸಂಕಲನಕಾರರು, ಕರ್ನಾಟಕ ಗೆಜೆಟ್, ಬೆಂಗಳೂರು – ವಿಶೇಷ ಪತ್ರದಲ್ಲಿ ಪ್ರಕಟಿಸಲು

ಪ್ರತಿ:

1. ಆಯುಕ್ತರು, ಬಿಬಿಎಂಪಿ
2. ಆಯುಕ್ತರು, ಆಕುಕ ಸೇವೆಗಳು

3. ಎಲ್ಲಾ ಜಿಲ್ಲಾಧಿಕಾರಿಗಳು
4. ನಿರ್ದೇಶಕರು, ಆಕುಕ ಸೇವೆಗಳು
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ
6. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು
7. ಅಧ್ಯಕ್ಷಕರು, **PHANA,** ಕೆ.ಎಂ.ಸಿ, 2 ವಿದ್ಯಾ ಭವನ, 16/6, ಮಿಲ್ಲರ್ ಟ್ಯಾಂಕ್ ಬಂಡ್ ರಸ್ತೆ, ವಸಂತನಗರ, ಬೆಂಗಳೂರು.
8. ಎಲ್ಲಾ ಖಾಸಗಿ ವೈದ್ಯಕೀಯ ಆಸ್ಪತ್ರೆಗಳು / ವೈದ್ಯರು – ನಿರ್ದೇಶಕರು, ಆಕುಕ ಇಲಾಖೆ ಇವರ ಮುಖಾಂತರ